# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1038 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪ್ರತಾಪ ಸಿಂಹ ನಾಯಕ್ ಕೆ., |
| ಉತ್ತರಿಸುವ ದಿನಾಂಕ | : | 23-02-2024 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅವಿಭಜಿತ ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ 'ಕುಡುಬಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 'ಕುಡುಂಬನ್' ಎಂದು ತಪ್ಪಾಗಿ ಹೆಸರು ಉಲ್ಲೇಖಿಸಿದ ಪರಿಣಾಮ ಕಳೆದ 70 ವರ್ಷಗಳಿಂದ ಸುಮಾರು 1.25 ಲಕ್ಷ ಮಂದಿ 'ಕುಡುಬಿ' ಸಮುದಾಯದ ಜನರಿಗೆ ಸರ್ಕಾರದ ಸವಲತ್ತುಗಳು ಸಿಗದೇ ಇಂದಿಗೂ ವಂಚಿತರಾಗುತ್ತಾ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಭಾರತ ಸಂವಿಧಾನದ ಅನುಚ್ಛೇದ 341 (2) ರ ಪ್ರಕಾರ ಯಾವುದೇ ಜಾತಿ ಅಥವಾ ಉಪ ಜಾತಿಯನ್ನು ಪರಿಶಿಷ್ಟ ಪಟ್ಟಿಯಲ್ಲಿ ಸೇರಿಸುವ/ಬದಲಾಯಿಸುವ ಅಧಿಕಾರ ಭಾರತದ ಸಂಸತ್‌ಗೆ ಇರುತ್ತದೆ. ರಾಜ್ಯ ಸರ್ಕಾರಕ್ಕೆ ಈ ರೀತಿಯ ಅಧಿಕಾರ ಇರುವುದಿಲ್ಲ. ಆದ್ದರಿಂದ ಕುಡುಬಿ ಸಮುದಾಯವನ್ನು 'ಕುಡುಂಬಣ್' ಎಂದು ಪರಿಗಣಿಸಿ, ಪರಿಶಿಷ್ಟ ಜಾತಿ ಸೌಲಭ್ಯವನ್ನು ನೀಡಲು ಸಾಧ್ಯವಿರುವುದಿಲ್ಲ.<br><br>ಮುಂದುವರೆದು, ಪ್ರಸ್ತುತ ಕುಡುಬಿ ಸಮುದಾಯ ಕರ್ನಾಟಕ ಹಿಂದುಳಿದ ವರ್ಗಗಳ ಪ್ರವರ್ಗ-1 ರಲ್ಲಿರುತ್ತದೆ. ಕುಡುಬಿ ಸಮುದಾಯದ ಬೇಡಿಕೆಯಂತೆ 2017 ನೇ ಸಾಲಿನಲ್ಲಿ ಕುಲಶಾಸ್ತ್ರೀಯ ಅಧ್ಯಯನ ನಡೆಸಿ, ಕುಡುಬಿ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರಿಸಲು ಭಾರತ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ ಮತ್ತು ಹೆಚ್ಚುವರಿ ಮಾಹಿತಿಯನ್ನು ಕೋರಿರುವ ಹಿನ್ನೆಲೆಯಲ್ಲಿ ಅದನ್ನು ಸಹ ಕಳುಹಿಸಲಾಗಿದೆ. ಪ್ರಸ್ತುತ ಪ್ರಕರಣ ಭಾರತ ಸರ್ಕಾರದ ಮಟ್ಟದಲ್ಲಿ ಬಾಕಿ ಇರುತ್ತದೆ. |
| ಆ) | ಬಂದಿದ್ದಲ್ಲಿ, 'ಕುಡುಬಿ; ಜನಾಂಗದ ಕುಲಶಾಸ್ತ್ರೀಯ ಅಧ್ಯಯನದ ವರದಿ 2008 ರಲ್ಲಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದು, ಅದರಲ್ಲಿ 'ಕುಡುಬಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸುವಂತೆ ಈಗಾಗಲೇ ಶಿಫಾರಸ್ಸು ಮಾಡಲಾಗಿದ್ದರೂ ಸಹ ಸರ್ಕಾರ ಇದುವರೆಗೆ ಯಾವುದೇ ಕ್ರಮ ಕೈಗೊಳ್ಳದೇ ಇರಲು ಕಾರಣಗಳೇನು; | |
| ಇ) | ಯಾವ ಕಾಲಮಿತಿಯೊಳಗೆ 'ಕುಡುಬಿ' ಸಮುದಾಯವನ್ನು ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಲಾಗುವುದು? | |

**ಸಕಇ 88 ಎಸ್‌ಎಲ್‌ಪಿ 2024**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**